ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ
"ಸಾರಿಗೆ ಭವನ" ಕೇಂದ್ರ ಕಛೇರಿ,
ಕೆ.ಹೆಚ್.ರಸ್ತೆ, ಶಾಂತಿನಗರ, ಬೆಂಗಳೂರು-560 027. ಭಾರತ
ದೂರವಾಣಿ : 080-22221321 / 22221325
ವೆಬ್-ಸೈಟ್ : www.ksrtc.in

Karnataka State Road Transport Corporation
"Transport House" Central Offices,
K.H.Road, Shanthinagar, Bangalore-560 027. India
Tel : 080-22221321 / 25
Website : www.ksrtc.in

ಸಂ.ಕರಾಸ:ಕೇಕ:ಆಡಳಿತ:ಸೇನಿ: 211 :2019-20 ದಿನಾಂಕ: 11/12 -11-2019

## ಸುತ್ತೋಲೆ ಸಂಖ್ಯೆ : 1657

ವಿಷಯ: ದೈಹಿಕವಾಗಿ ಅಸಮರ್ಥಗೊಂಡ ನಿಗಮದ ಅಧಿಕಾರಿ/ನೌಕರರ ಪ್ರಸ್ತುತ ಜಾರಿಯಲ್ಲಿರುವ ಸ್ವಯಂ ನಿವೃತ್ತಿ ಯೋಜನೆಯನ್ನು ಪರಿಷ್ಕರಿಸುವ ಕುರಿತು.

ಉಲ್ಲೇಖ: 1) ಸುತ್ತೋಲೆ 1474, ದಿನಾಂಕ:12-10-2012
2) ಸುತ್ತೋಲೆ 1483, ದಿನಾಂಕ:14-03-2013
3) ಮಂಡಳಿ ಠರಾವು 10108, ದಿನಾಂಕ:09-10-2019

-----

ಕರಾರಸಾ ನಿಗಮದಲ್ಲಿ ಅಂಗವಿಕಲ ವ್ಯಕ್ತಿಗಳ ಕಾಯ್ದೆ 1995 ವ್ಯಾಪ್ತಿಯಲ್ಲಿ ಬರುವ ಕಾಯಿಲೆಯು ಸೇರಿದಂತೆ ಯಾವುದೇ ಕಾಯಿಲೆಯಿಂದ ಬಳಲುತ್ತಿದ್ದು, ಮೂಲತಃ ನೇಮಕಗೊಂಡ ಹುದ್ದೆಯ ಕರ್ತವ್ಯ ನಿರ್ವಹಿಸಲು ಅಸಮರ್ಥರಾದ ಮತ್ತು ವರ್ಗ ಭೇದವಿಲ್ಲದೆ ಎಲ್ಲಾ ವರ್ಗದ ನೌಕರರು/ಅಧಿಕಾರಿಗಳಿಗೆ ಅನ್ವಯವಾಗುವಂತೆ ಆಕರ್ಷಣೀಯ ಸ್ವಯಂ ನಿವೃತ್ತಿ ಯೋಜನೆಯನ್ನು ಉಲ್ಲೇಖ-1 ಮತ್ತು 2 ರಂತೆ ಜಾರಿಗೆ ತರಲಾಗಿದೆ.

ಪ್ರಸ್ತುತ, ಸದರಿ ನಿವೃತ್ತಿ ಯೋಜನೆಯನ್ನು ಇನ್ನೂ ಹೆಚ್ಚು ಆಕರ್ಷಣೀಯ ಮಾಡಬೇಕೆಂಬ ಹಿನ್ನೆಲೆಯಲ್ಲಿ ಈ ಯೋಜನೆಯ ಸೌಲಭ್ಯವನ್ನು ಪರಿಷ್ಕರಿಸುವುದು ಸೂಕ್ತವೆಂದು ಅಭಿಪ್ರಾಯಿಸಿ, ಪ್ರಸ್ತಾವನೆಯನ್ನು ನಿಗಮದ ನಿರ್ದೇಶಕರ ಮಂಡಳಿಯಲ್ಲಿ ಮಂಡಿಸಲಾಗಿದ್ದು, ನಿಗಮದ ನಿರ್ದೇಶಕರ ಮಂಡಳಿಯು ಠರಾವು ಸಂಖ್ಯೆ: 10108, ದಿನಾಂಕ:09-10-2019 ರನ್ವಯ ಒಪ್ಪಿಗೆ ನೀಡಿರುತ್ತದೆ.

ಅದರಂತೆ, ಆಕರ್ಷಣೀಯ ಸ್ವಯಂ ನಿವೃತ್ತಿ ಯೋಜನೆಯ ಆರ್ಥಿಕ ಸೌಲಭ್ಯವನ್ನು ಈ ಕೆಳಕಂಡಂತೆ ಪರಿಷ್ಕರಿಸಲಾಗಿದೆ.

| ಕ್ರ. ಸಂ | ಬಾಕಿ ಉಳಿದಿರುವ ಕನಿಷ್ಠ ಸೇವಾವಧಿ | ಕನಿಷ್ಠ 10 ವರ್ಷ ನಿರಂತರ ಸೇವೆ ಸಲ್ಲಿಸಿರುವ ಮತ್ತು ಅಂಗವಿಕಲ ವ್ಯಕ್ತಿಗಳ ಕಾಯ್ದೆ 1995 ಹಾಗೂ ಅಂಗವಿಕಲ ವ್ಯಕ್ತಿಗಳ ಹಕ್ಕುಗಳ ಕಾಯ್ದೆ 2016 ರನ್ವಯ ಗುರುತಿಸಲ್ಪಟ್ಟ ಅಂಗವಿಕಲತೆಯಿಂದ ಶೇಕಡ 40 ಹಾಗೂ ಅದಕ್ಕಿಂತ ಹೆಚ್ಚಿನ ಅಂಗವಿಕಲತೆ ಹೊಂದಿರುವ ಕುರಿತು ವೈದ್ಯಕೀಯ ಮಂಡಳಿಯಿಂದ ಪಡೆದ ಪ್ರಮಾಣ ಪತ್ರವನ್ನು ಹಾಜರುಪಡಿಸುವ ಪ್ರಕರಣಗಳಿಗೆ ಉಳಿಕೆ ಸೇವಾವಧಿಗೆ ದೊರೆಯುವ ಹೆಚ್ಚುವರಿ ಆರ್ಥಿಕ ಸೌಲಭ್ಯ | ಕನಿಷ್ಠ 10 ವರ್ಷ ನಿರಂತರ ಸೇವೆ ಸಲ್ಲಿಸಿರುವ ಮತ್ತು ಅಂಗವಿಕಲ ವ್ಯಕ್ತಿಗಳ ಕಾಯ್ದೆ 1995 ಹಾಗೂ ಅಂಗವಿಕಲ ವ್ಯಕ್ತಿಗಳ ಹಕ್ಕುಗಳ ಕಾಯ್ದೆ 2016 ರ ವ್ಯಾಪ್ತಿಗೊಳಪಡದೆ ಇರುವ ಇತರೆ ಖಾಯಿಲೆಗಳಿಂದ ಬಳಲುತ್ತಿರುವ ನೌಕರರು ದೈಹಿಕವಾಗಿ ಅಶಕ್ತರೆಂದು ವೈದ್ಯಕೀಯ ಮಂಡಳಿಯಿಂದ ಪಡೆದ ಪ್ರಮಾಣ ಪತ್ರವನ್ನು ಹಾಜರುಪಡಿಸುವ ಪ್ರಕರಣಗಳಿಗೆ ಉಳಿಕೆ ಸೇವಾವಧಿಗೆ ದೊರೆಯುವ ಹೆಚ್ಚುವರಿ ಆರ್ಥಿಕ ಸೌಲಭ್ಯ |
|---|---|---|---|
| 1 | ಒಂದು ವರ್ಷ | 2 ಲಕ್ಷಗಳು | 2 ಲಕ್ಷಗಳು |
| 2 | ಎರಡು ವರ್ಷ | 4 ಲಕ್ಷಗಳು | 3 ಲಕ್ಷಗಳು |
| 3 | ಮೂರು ವರ್ಷ | 6 ಲಕ್ಷಗಳು | 4 ಲಕ್ಷಗಳು |
| 4 | ನಾಲ್ಕು ವರ್ಷ | 8 ಲಕ್ಷಗಳು | 5 ಲಕ್ಷಗಳು |
| 5 | ಐದು ವರ್ಷ | 10 ಲಕ್ಷಗಳು | 6 ಲಕ್ಷಗಳು |

ಈ ಯೋಜನೆಯು ಐಚ್ಛಿಕ ಯೋಜನೆ ಆಗಿರುತ್ತದೆ. ಉಳಿದಂತೆ ಉಲ್ಲೇಖಿತ ಸುತ್ತೋಲೆಯಲ್ಲಿನ ನಿರ್ದೇಶನಗಳಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ. ಸಂಬಂಧಪಟ್ಟವರೆಲ್ಲರೂ ಮೇಲಿನ ತಿದ್ದುಪಡಿಗಳನ್ನು ಮನದಟ್ಟು ಮಾಡಿಕೊಂಡು ಅದರಂತೆ ಕ್ರಮ ಕೈಗೊಳ್ಳತಕ್ಕದ್ದು.

ಈ ಸುತ್ತೋಲೆಯು ತಕ್ಷಣದಿಂದ ಜಾರಿಗೆ ಬರುತ್ತದೆ.

(ಶಿವಯೋಗಿ ಸಿ. ಕಳಸದ, ಭಾ.ಆ.ಸೇ.,)
ವ್ಯವಸ್ಥಾಪಕ ನಿರ್ದೇಶಕರು

<u>ಪ್ರತಿ ಮಾಹಿತಿಗಾಗಿ:</u>

1. ಅಧ್ಯಕ್ಷರು/ಉಪಾಧ್ಯಕ್ಷರು, ಕರಾರಸಾ ನಿಗಮ ರವರ ಆಪ್ತ ಕಾರ್ಯದರ್ಶಿಯವರಿಗೆ.
2. ವ್ಯವಸ್ಥಾಪಕ ನಿರ್ದೇಶಕರು, ಬೆಂಮಸಾಸಂಸ್ಥೆ/ವಾಕರಸಾಸಂಸ್ಥೆ/ಈಕರಸಾಸಂಸ್ಥೆ ರವರಿಗೆ.
3. ನಿರ್ದೇಶಕರು(ಸಿ:ಪ)/ ನಿರ್ದೇಶಕರು(ಭ:ಜಾ), ಕರಾರಸಾ ನಿಗಮ, ರವರಿಗೆ.

<u>ಪ್ರತಿ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ:</u>

4. ಎಲ್ಲಾ ಇಲಾಖಾ ಮುಖ್ಯಸ್ಥರುಗಳು/ವಿಭಾಗೀಯ ಮುಖ್ಯಸ್ಥರುಗಳು, ಕರಾರಸಾ ನಿಗಮ ರವರುಗಳಿಗೆ.
5. ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು (ನೇಮಕ), ಕರಾರಸಾ ನಿಗಮ/ ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು, ಬೆಂಮಸಾ ಸಂಸ್ಥೆ/ವಾಕರಸಾ ಸಂಸ್ಥೆ/ಈಕರಸಾ ಸಂಸ್ಥೆ ರವರಿಗೆ.
6. ಉಪ ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು, ಕರಾರಸಾ ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರಿಗೆ.
7. ಮುಖ್ಯ ಭದ್ರತಾ ಮತ್ತು ಜಾಗ್ರತಾಧಿಕಾರಿ, ಕರಾರಸಾ ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರಿಗೆ ಸುತ್ತೋಲೆಯನ್ನು ಕೇಂದ್ರ ಕಛೇರಿಯ ಸೂಚನಾ ಫಲಕದಲ್ಲಿ ಪ್ರದರ್ಶಿಸಿ, ಪ್ರದರ್ಶಿತಗೊಂಡ ಬಗ್ಗೆ ಪ್ರಧಾನ ವ್ಯವಸ್ಥಾಪಕರು (ಸಿಬ್ಬಂದಿ) ರವರಿಗೆ ವರದಿ ಸಲ್ಲಿಸುವುದು.
8. ಮುಖ್ಯ ಗಣಕ ವ್ಯವಸ್ಥಾಪಕರು, ಕರಾರಸಾ ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರಿಗೆ ಸುತ್ತೋಲೆಯನ್ನು ನಿಗಮದ ಅಧಿಕೃತ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು.
9. ಪ್ರಧಾನ ಕಛೇರಿ ಪತ್ರ ಕಡತ.